# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ನಂ.03, ಅಟ್ಟೂರು, ವಾರ್ಡ್‌ಗೆ ಸಂಬಂಧಿಸಿದಂತೆ

## ವಾರ್ಡ್ ಕಮಿಟಿ ಸದಸ್ಯರುಗಳ ಸಭೆ, ದಿನಾಂಕ: 05-01-2019

## ಸಭಾ ನಡಾವಳಿ

1. ಅಧ್ಯಕ್ಷರು : ಶ್ರೀಮತಿ.ನೇತ್ರಾ ಪಲ್ಲವಿ.ಎಂ (ಪಾಲಿಕೆ ಸದಸ್ಯರು ವಾರ್ಡ್: 03)
2. ವಾರ್ಡ್ ಕಮಿಟಿ ಸದಸ್ಯರುಗಳ ಸಂಖ್ಯೆ : 1 + 10 = 11 nos.
3. ಹಾಜರಿದ್ದ ಸದಸ್ಯರುಗಳ ಸಂಖ್ಯೆ : 8 nos.
4. ಹಾಜರಿದ್ದ ಅಧಿಕಾರಿಗಳ ವಿವರ : ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ಸಹಾಯಕ ಅಭಿಯಂತರರು, ವಾರ್ಡ್ ನಂ. 03.

ಈ ದಿವಸ ಶನಿವಾರ ಸಂಜೆ 4:30 ಕ್ಕೆ ಸರಿಯಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಸಹಾಯಕ ಕಂದಾಯ ಅಧಿಕಾರಿ (ಯಲಹಂಕ ಉಪನಗರ) ಕಛೇರಿಯಲ್ಲಿ ವಾರ್ಡ್ ಕಮಿಟಿ ಸದಸ್ಯರುಗಳ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ಪಾಲಿಕೆ ಸದಸ್ಯರು, ವಾರ್ಡ್ ನಂ.03, ಅಟ್ಟೂರು ರವರ ಅಧ್ಯಕ್ಷತೆಯಲ್ಲಿ ಕರೆಯಲಾಗಿತ್ತು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಪಾಲಿಕೆ ಸದಸ್ಯರು, ವಾರ್ಡ್ ನಂ.03, ವಾರ್ಡ್ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಾರ್ಡ್ ಕಮಿಟಿ ಸದಸ್ಯ ಕಾರ್ಯದರ್ಶಿ ರವರು ಸ್ವಾಗತ ಕೋರಿದ ನಂತರ ಸಭೆಯನ್ನು ಪ್ರಾರಂಭ ಮಾಡಲಾಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಾನ್ಯ ಅಧ್ಯಕ್ಷರು, ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟಂತೆ ವಿವರಿಸುತ್ತಾ ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸಿದೆ.

ವಾರ್ಡ್ ನಂ.3 ರ ಸರ್ದಾರ್ ವಲ್ಲಭಾಯ್ ಪಟೇಲ್ ಪಾರ್ಕ್ ಮತ್ತು ಮಹರ್ಷಿ ವಾಲ್ಮಿಕಿ ಪಾರ್ಕಿನಲ್ಲಿ ಸಾರ್ವಜನಿಕರ ಉಪಯೋಗಕ್ಕಾಗಿ ಅನುಕೂಲವಾಗುವಂತೆ ಶೌಚಾಲಯಗಳ ನಿರ್ಮಾಣದ ಬಗ್ಗೆ ವಾರ್ಡ್ ಕಮಿಟಿ ಸದಸ್ಯರಾದ ಶ್ರೀ.ಪಿ.ನಾಗಪ್ಪ ರವರು ಚರ್ಚಿಸಿದರು.

ವಾರ್ಡ್ ನಂ.3 ರ ಎಸ್ಮಾರ್ಟ್ ಲೇಔಟ್‌ನಲ್ಲಿ ಬೀದಿ ದೀಪಗಳನ್ನು ಸ್ವಿಚ್ ಆಫ್ ಮತ್ತು ಆನ್ ಮಾಡಿಸುವ ವ್ಯವಸ್ಥೆಯು ಸರಿಯಿಲ್ಲವೆಂದು ವಾರ್ಡ್ ಕಮಿಟಿ ಸದಸ್ಯರಾದ ಶ್ರೀಮತಿ.ಪುಷ್ಪಾವತಿ ರವರು ತಿಳಿಸಿದರು ಆಗಾಗಿ ಈ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಬೇಕಾಗಿ ಸಭೆಯಲ್ಲಿ ಚರ್ಚಿಸಿದರು.

ಅಟ್ಟೂರು ವಾರ್ಡ್ ಮತ್ತು 4ನೇ ಹಂತ ಯಲಹಂಕ ಪ್ರದೇಶಗಳಲ್ಲಿ, ಚಿಕ್ಕಬೆಟ್ಟಹಳ್ಳಿ ಮತ್ತು ದೊಡ್ಡಬೆಟ್ಟಹಳ್ಳಿ ಪ್ರದೇಶಗಳಲ್ಲಿ ಸೊಳ್ಳೆ ನಿಯಂತ್ರಣಕ್ಕಾಗಿ ಔಷಧಿಯನ್ನು ಸಿಂಪಡಿಸುವುದು ಅತ್ಯಾವಶ್ಯಕವಾಗಿದೆ ಎಂದು ಶ್ರೀಮತಿ.ರಾಧ, ವಾರ್ಡ್ ಕಮಿಟಿ ಸದಸ್ಯರು ತಿಳಿಸಿದರು ಹಾಗೂ ಸಂಬಂಧಪಟ್ಟ ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಗೆ ಸೂಕ್ತ ಆದೇಶ ನೀಡಬೇಕಾಗಿ ಕೋರಿದರು.

ಚಿಕ್ಕಬೆಟ್ಟಹಳ್ಳಿ ಮತ್ತು ದೊಡ್ಡಬೆಟ್ಟಹಳ್ಳಿಗಳಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ಇದನ್ನು ನಿಯಂತ್ರಿಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು, ಮರಗಳ ಮೇಲೆ ವಿದ್ಯುತ್ ತಂತಿಗಳು ಇರುವುದನ್ನು ಸುರಕ್ಷತೆಯ ಹಿತದೃಷ್ಟಿಯಿಂದ ಸರಿಪಡಿಸಬೇಕಾಗಿ ಮತ್ತು ಕಸದ ವಿಲೇವಾರಿಗಳ ಬಗ್ಗೆ ಹೆಚ್ಚು ಗಮನಹರಿಸಿ ವಾರ್ಡ್ ನಂ.3, ಅಟ್ಟೂರು ವಾರ್ಡಿಗೆ ಸಂಬಂಧಿಸಿದಂತೆ, ಸಾರ್ವಜನಿಕರಿಂದ ದೂರುಗಳು ಬಾರದಂತೆ ಅಧಿಕಾರಿಗಳು / ಸಿಬ್ಬಂದಿಗಳು ಕಾರ್ಯನಿರ್ವಹಿಸಬೇಕಾಗಿ ಮಾನ್ಯ ಅಧ್ಯಕ್ಷರು ಸೂಚಿಸುತ್ತಾ, ಎಲ್ಲಾ ಸಮಸ್ಯೆಗಳನ್ನು ಪರಿಶೀಲಿಸಿದರು ಹಾಗೂ ಕುಂದುಕೊರತೆಗಳ ಬಗ್ಗೆ ಮುಂದಿನ ಸಭೆಯಲ್ಲಿ ಚರ್ಚಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದೆಂದು ತಿಳಿಸಿ ಸಭೆಯಲ್ಲಿ ಹಾಜರಿದ್ದ ಎಲ್ಲಾರಿಗೂ ವಂದಿಸಿ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

5/1/19

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ.3, ಅಟ್ಟೂರು

ಪ್ರತಿಯನ್ನು:

1. ಮಾನ್ಯ ಅಧ್ಯಕ್ಷರು, ವಾರ್ಡ್ ಕಮಿಟಿ, ವಾರ್ಡ್ ನಂ.03, ಅಟ್ಟೂರು ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಉಪ ಆಯುಕ್ತರು ಯಲಹಂಕ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿ, ಯಲಹಂಕ ವಿಭಾಗ, ಯಲಹಂಕ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
5. ಮಾನ್ಯ ಸದಸ್ಯರು, ವಾರ್ಡ್ ಕಮಿಟಿ, ವಾರ್ಡ್ ನಂ.03, ಅಟ್ಟೂರು ರವರುಗಳ ಮಾಹಿತಿಗಾಗಿ.
6. ಅಧೀಕ್ಷಕ ಅಭಿಯಂತರರು, ಘ.ತ್ಯಾ.ನಿ ಕೋಶ ಯಲಹಂಕ ವಲಯ ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
7. ಸ.ಕಾ.ಅ ಘ.ತ್ಯಾ.ನಿ ಬ್ಯಾಟರಾನಪುರ ವಿಭಾಗ ಯ.ವ ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
8. ಸ.ಕಾ.ಅ ಯಲಹಂಕ ಉಪನಗರ ಉಪ ವಿಭಾಗ ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
9. ಕಛೇರಿ ಕಡತಕ್ಕೆ.